JANUARY 09, 2025

**AKASHAVANI - DHARWAD**

**PRADESH SAMACHARA (KANNADA) 07.05**

<><><>

**ಮುಖ್ಯಾಂಶಗಳು:**

- **ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಗೃಹಸಚಿವರ ಎದುರು 6 ನಕ್ಸಲರ ಶರಣಾಗತಿ**

- **ಜನಸ್ನೇಹಿ ಪೊಲೀಸ್ ವ್ಯವಸ್ಥೆಯನ್ನು ರೂಪಿಸಿ: ಮುಖ್ಯಮಂತ್ರಿ ಸಿದ್ದರಾಮಯ್ಯ**

- **ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ಅಹವಾಲು ಸಲ್ಲಿಸಲು ಸರಳ, ಸುಲಭ ಹಾಗೂ ಸಮರ್ಥ ವ್ಯವಸ್ಥೆ ಜಾರಿಗೆ.**

- **ಬೆಳಗಾವಿಯಲ್ಲಿ ಇದೇ 21 ರಂದು 'ಗಾಂಧಿ ಭಾರತ' ಕಾರ್ಯಕ್ರಮ ಆಯೋಜನೆ.**

- **ವಿಜೃಂಭಣೆಯಿಂದ ಜರುಗಿದ ಆಕಾಶವಾಣಿ ಧಾರವಾಡ ಕೇಂದ್ರದ ಅಮೃತ ಮಹೋತ್ಸವ**

<><><>

**ಬೆಂಗಳೂರಿನ ಗೃಹ ಕಚೇರಿ ಕೃ ಷ್ಣಾದಲ್ಲಿ 6 ಮಂದಿ ನಕ್ಸಲರು ಮುಖ್ಯಮಂತ್ರಿ** ಸಿದ್ದರಾಮಯ್ಯ ಹಾಗೂ ಗೃಹ ಸಚಿವ ಡಾ. ಪರಮೇಶ್ವರ್, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಮ್ಮುಖದಲ್ಲಿ ಶರಣಾಗತರಾಗಿದ್ದಾರೆ. ನಕ್ಸಲರಾದ ಮುಂಡಗಾರು ಲತಾ, ವನಜಾಕ್ಷಿ, ಸುಂದರಿ, ಕೇರಳದ ಜೀಶಾ, ಆಂಧ್ರದ ಮಾರಪ್ಪ ಅರೋಲಿ, ತಮಿಳುನಾಡಿನ ವಸಂತ್ ಸರ್ಕಾರದ ಮುಂದೆ ಶರಣಾಗಿದ್ದಾರೆ. ನಿಗದಿ ಪ್ರಕಾರ, ಚಿಕ್ಕಮಗಳೂರು ಜಿಲ್ಲಾಡಳಿತದ ಮುಂದೆ ನಕ್ಸಲರು ಶರಣಾಗಬೇಕಿತ್ತು. ಆದರೆ, ಕೊನೆ ಕ್ಷಣದಲ್ಲಿ ಚಿಕ್ಕಮಗಳೂರು ಬದಲು ಬೆಂಗಳೂರಿನಲ್ಲಿ ಶರಣಾಗಿದ್ದಾರೆ. ಪಶ್ಚಿಮ ಘಟ್ಟಗಳ ಸಾಲಿನಲ್ಲಿ ಸಕ್ರಿಯವಾಗಿದ್ದ ನಕ್ಸಲರನ್ನ ಶಾಂತಿಗಾಗಿ ನಾಗರಿಕ ವೇದಿಕೆ ಹಾಗೂ ಶರಣಾಗತಿ ಸಮಿತಿ ಕಾಡಿನೊಳಗೆ ಭೇಟಿಯಾಗಿ ಸಭೆ ನಡೆಸಿ ನಕ್ಸಲರ ಮನವೊಲಿಸುವಲ್ಲಿ ಯಶಸ್ವಿಯಾಗಿತ್ತು. ನಕ್ಸಲ್ ನಾಯಕ ವಿಕ್ರಂಗೌಡ ಸಾವನ್ನಪ್ಪಿದಾಗ ಸರ್ಕಾರವೇ ಶರಣಾಗುವಂತೆ ನಕ್ಸಲರಿಗೆ ಕರೆ ನೀಡಿತ್ತು.

<><><>

**ಅಪರಾಧಿಗಳಿಗೆ ಭಯದ ವಾತಾವರಣ, ಜನ ಸಾಮಾನ್ಯರಿಗೆ ಭಯ ಮುಕ್ತ ವಾತಾವರಣ** ನಿರ್ಮಿಸುವುದು ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳ ಕರ್ತವ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರು ನಗರದಲ್ಲಿ ನೂತನವಾಗಿ ನಿರ್ಮಿಸಿರುವ ಪೊಲೀಸ್ ಠಾಣೆ, ಕಚೇರಿಗಳ ಉದ್ಘಾಟನೆ ಹಾಗೂ ಪೊಲೀಸ್ ವಸತಿ ಸಮುಚ್ಚಯಗಳ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ರಾಜ್ಯದ ಜನಸಂಖ್ಯೆ 7 ಕೋಟಿ ದಾಟಿ ಹೋಗುತ್ತಿದೆ. ಇವರೆಲ್ಲರ ರಕ್ಷಣೆ, ಆಸ್ತಿ ಪಾಸ್ತಿ, ಮಾನ, ಪ್ರಾಣ ರಕ್ಷಿಸಿ ನೆಮ್ಮದಿಯ ಬದುಕಿಗೆ ಸುರಕ್ಷಿತ ವಾತಾವರಣ ಸೃಷ್ಟಿಸುವ ಜವಾಬ್ದಾರಿ ಪೊಲೀಸ್ ಇಲಾಖೆ ಮೇಲಿದೆ. ಇದಕ್ಕಾಗಿ ಇಲಾಖೆಗೆ ಅಗತ್ಯವಾದ ಸವಲತ್ತು ಮತ್ತು ನೂತನ ಠಾಣೆಗಳನ್ನು ಒದಗಿಸಲು ಸರ್ಕಾರ ಸದಾ ಸಿದ್ಧವಿದೆ ಎಂದರು. ರಾಜ್ಯದಲ್ಲಿ ಶಾಂತಿ ಸುವ್ಯವಸ್ಥೆ ಇದ್ದಾಗ ಅಭಿವೃದ್ಧಿಯ ವೇಗ ಹೆಚ್ಚುತ್ತದೆ. ಹೀಗಾಗಿ ಜನಸ್ನೇಹಿ ಪೊಲೀಸ್ ವ್ಯವಸ್ಥೆಯನ್ನು ರೂಪಿಸಿ ಠಾಣೆಗೆ ಬರುವವರನ್ನು ಆರೋಗ್ಯಕರವಾಗಿ ನಡೆಸಿಕೊಳ್ಳಬೇಕು; ರಾಜ್ಯದಲ್ಲಿ ಅಪರಾಧಗಳ ಪ್ರಮಾಣ ಕಡಿಮೆ ಆಗುತ್ತಿರುವುದು ನೆಮ್ಮದಿಯ ಸಂಗತಿ. ಆದರೆ ಪೊಲೀಸರು ಚಾಪೆ ಕೆಳಗೆ ತೂರಿದರೆ ಅಪರಾಧಿಗಳು ರಂಗೋಲಿ ಕೆಳಗೆ ತೂರಿ, ಕಾನೂನಿನಿಂದ ತಪ್ಪಿಸಿಕೊಳ್ಳಲು ಯತ್ನಿಸುತ್ತಾರೆ. ಇದಕ್ಕೆ ಅವಕಾಶ ಆಗಬಾರದು ಎಂದರು.

<><><>

**ಕೇಂದ್ರ ಉಕ್ಕು ಮತ್ತು ಭಾರೀ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿಯವರು** ದೆಹಲಿಯಲ್ಲಿ ಕೇಂದ್ರದ ಹೆದ್ದಾರಿ ಮತ್ತು ಭೂಸಾರಿಗೆ ಸಚಿವ ನಿತಿನ್ ಗಡ್ಕರಿ ಅವರನ್ನು ಭೇಟಿಯಾಗಿ ರಾಜ್ಯದ ವಿವಿಧ ಹೆದ್ದಾರಿ ಯೋಜನೆಗಳ ಕುರಿತು ಸಮಾಲೋಚಿಸಿದರು. ರಾಜ್ಯದಲ್ಲಿ ಹಲವಾರು ಹೆದ್ದಾರಿ ಯೋಜನೆಗಳು ಅಭಿವೃದ್ಧಿಯಾಗಬೇಕಾಗಿದೆ. ಈ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಬೇಕು. ಅದರಲ್ಲೂ ಮಂಡ್ಯ, ಕೋಲಾರ, ಚಿಕ್ಕಬಳ್ಳಾಪುರ, ಚಾಮರಾಜನಗರ, ಮೈಸೂರು ಸೇರಿದಂತೆ ಹಲವು ಹೆದ್ದಾರಿ ಯೋಜನೆಗಳನ್ನು ಕಾರ್ಯಗತಗೊಳಿಸುವಂತೆ ಮನವಿ ಸಲ್ಲಿಸಿದರು. ಮಂಡ್ಯ ಹೆದ್ದಾರಿಯ ಬೈಪಾಸ್ ರಸ್ತೆ ಅಗಲೀಕರಣ–ವೈಟ್ ಟ್ಯಾಪಿಂಗ್ ಹಾಗೂ ರಾಷ್ಟ್ರೀಯ ಹೆದ್ದಾರಿ 275ರಲ್ಲಿರುವ ನಗರದ ಎಲ್ಲಾ ಜಂಕ್ಷನ್, ಪಾದಚಾರಿ ಮಾರ್ಗ ಅಭಿವೃದ್ಧಿ ಬಗ್ಗೆಯೂ ಸಾರಿಗೆ ಸಚಿವರ ಗಮನ ಸೆಳೆಯಲಾಯಿತು. ಹೆಚ್.ಡಿ.ಕುಮಾರಸ್ವಾಮಿ ಅವರ ಮನವಿಗೆ ಸ್ಪಂದಿಸಿದ ಸಚಿವ ನಿತಿನ್ ಗಡ್ಕರಿ ಕೆಲ ಯೋಜನೆಗಳ ಬಗ್ಗೆ ಖುದ್ದು ಗಮನ ಹರಿಸುವುದಾಗಿ ಭರವಸೆ ನೀಡಿದ್ದಾರೆ.

<><><>

**ಮಹಾತ್ಮಗಾಂಧಿ ನಗರೋತ್ಥಾನ ಯೋಜನೆಯಡಿ ದಾವಣಗೆರೆ ನಗರಾಭಿವೃದ್ಧಿಗೆ 125** ಕೋಟಿ ಅನುದಾನ ಬಿಡುಗಡೆಯಾಗಿದ್ದು, ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಹೇಳಿದ್ದಾರೆ. 8 ಕೋಟಿ ರೂಪಾಯಿ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು; ಬೆಂಗಳೂರು ಮಾದರಿಯಲ್ಲಿ ದಾವಣಗೆರೆ ಪಾಲಿಕೆ ವ್ಯಾಪ್ತಿ ಕೆಲಸ ಕಾರ್ಯ ಗಳಾಗಬೇಕೆನ್ನುವುದು ನಮ್ಮ ಚಿಂತನೆಯಾಗಿದೆ. ಇದಕ್ಕಾಗಿ ಪಾಲಿಕೆಯ ಎಲ್ಲ ಸದಸ್ಯರೂ ಪಕ್ಷ ಬೇಧ ಮರೆತು ಕೆಲಸ ಮಾಡಬೇಕೆಂದು ತಿಳಿಸಿದರು.

<><><>

**ಜನತೆ ತಮ್ಮ ಸಮಸ್ಯೆಗಳಿಗೆ ಪರಿಹಾರ ಪಡೆಯಲು ಅಹವಾಲು ದಾಖಲಿಸುವುದು ಅತಿ** ಮುಖ್ಯವಾಗುತ್ತದೆ, ಜನರು ಅಹವಾಲು ಸಲ್ಲಿಸುವುದಕ್ಕಾಗಿ ಸರಳ, ಸುಲಭ ಹಾಗೂ ಸಮರ್ಥ ವ್ಯವಸ್ಥೆಯನ್ನು ಗ್ರಾಮೀಣಾಭಿವೃದ್ಧಿ ಇಲಾಖೆ ಕೈಗೊಂಡಿದೆ ಎಂದು

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಖಾತೆ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಕುಂದು–ಕೊರತೆಗಳನ್ನು ಹಾಗೂ ಸಮಸ್ಯೆಗಳನ್ನು ದಾಖಲಿಸಲು ಇದ್ದ ಪ್ರತ್ಯೇಕ ಕರೆ ಸಂಖ್ಯೆಗಳನ್ನು ಒಗ್ಗೂಡಿಸಿ ಪಂಚಮಿತ್ರ ಸಹಾಯವಾಣಿ ಕೇಂದ್ರವನ್ನು ಸ್ಥಾಪಿಸಲಾಗಿದೆ. ಗ್ರಾಮೀಣ ಜನತೆ ತಮ್ಮೆಲ್ಲಾ ಅಹವಾಲುಗಳನ್ನು ದಾಖಲಿಸಲು ಪಂಚಮಿತ್ರ ಸಹಾಯವಾಣಿ ಸಂಖ್ಯೆ 8277506000ಗೆ ಕರೆ ಮಾಡಬಹುದು. ಅಥವಾ ಅದೇ ಸಂಖ್ಯೆಯಲ್ಲಿ ವಾಟ್ಸಾಪ್ ಚಾಟ್ ಮೂಲಕವೂ ಅಹವಾಲು ಸಲ್ಲಿಸಬಹುದು ಎಂದು ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ತಿಳಿಸಿದ್ದಾರೆ.

<><><>

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

<><><>

**ಬೆಳಗಾವಿಯಲ್ಲಿ ಇದೇ 21 ರಂದು 'ಗಾಂಧಿ ಭಾರತ' ಕಾರ್ಯಕ್ರಮ** ಆಯೋಜಿಸಲಾಗಿದೆ ಎಂದು ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ 2024ರ ಡಿಸೆಂಬರ್ 27 ರಂದು ಬೆಳಗಾವಿಯಲ್ಲಿ ನಡೆಯಬೇಕಿದ್ದ ಗಾಂಧಿ ಭಾರತ ಕಾರ್ಯಕ್ರಮ ಮಾಜಿ ಪ್ರಧಾನಿ ಡಾಕ್ಟರ್ ಮನಮೋಹನ್ ಸಿಂಗ್ ರವರ ನಿಧನದಿಂದಾಗಿ ರದ್ದುಗೊಂಡಿತ್ತು. 'ಜೈ ಬಾಪು, ಜೈ ಭೀಮ, ಜೈ ಸಂವಿಧಾನ' ಹೆಸರಿನಲ್ಲಿ ಕಾರ್ಯಕ್ರಮ ನಡೆಯಲಿದ್ದು, ಬೆಳಗಾವಿ ಗ್ರಾಮೀಣ ಕ್ಷೇತ್ರದ ವ್ಯಾಪ್ತಿಗೆ ಬರುವ ಸುವರ್ಣ ವಿಧಾನಸೌಧದ ಆವರಣದಲ್ಲಿ ಬೃಹತ್ ಗಾಂಧಿ ಪ್ರತಿಮೆ ಅನಾವರಣಗೊಳ್ಳಲಿದೆ. ರಾಜ್ಯಾದ್ಯಂತ ಪ್ರತಿ ಕ್ಷೇತ್ರದಿಂದ 100 ಜನ ಮುಖಂಡರು ಆಗಮಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

<><><>

**ಎಲ್ಲ ಕ್ಷೇತ್ರಗಳ ಸಾಧಕರು,**ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಕಲಾವಿದರುಧಾರವಾಡ ಆಕಾಶವಾಣಿಯೊಂದಿಗೆ ಅವಿನಾಭಾವ ಸಂಬಂಧ ಹೊಂದಿದ್ದಾರೆ. ವರ್ಷಗಳು ಉರುಳಿದಂತೆ, ಆಕಾಶವಾಣಿ ಸುದೃಢವಾಗುತ್ತ ಸಾಗಿದೆ. ಎಲ್ಲರನ್ನೂ ಒಳಗೊಂಡು ನಡೆಯುವ, ಗುಣಮಟ್ಟದ ಹೂರಣಕ್ಕೆ ಹೆಸರುವಾಸಿಯಾಗಿದೆ. ಸದಭಿರುಚಿಯ ಕಾರ್ಯಕ್ರಮ ಮತ್ತು ಸಹೃದಯ ಕೇಳುಗರನ್ನು ಹೊಂದಿರುವುದು, ಹೆಮ್ಮೆಯ ವಿಷಯ ಎಂದು ಖ್ಯಾತ ಮಕ್ಕಳ ತಜ್ಞ,ಡಾಕ್ಟರ್ ರಾಜನ್ ದೇಶಪಾಂಡೆ ಹೇಳಿದರು.

ಧಾರವಾಡ ಆಕಾಶವಾಣಿಯ ಅಮೃತ ಮಹೋತ್ಸವ ಸಂದರ್ಭ, ಕೇಂದ್ರದ ಆವರಣದಲ್ಲಿ ಜರುಗಿದ ಸಂಭ್ರಮಾಚರಣೆ ಕಾರ್ಯಕ್ರಮದಲ್ಲಿ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು.

<><><>

**ಬೈಟ್: ಡಾಕ್ಟರ್ ರಾಜನ್ ದೇಶಪಾಂಡೆ 45 ಸೆಕೆಂದುಗಳು**

<><><>

**ಹಿರಿಯ ಸಾಹಿತಿ ಹಾವೇರಿಯ**ಸತೀಶ ಕುಲಕರ್ಣಿ ಮಾತನಾಡಿ, ಆಕಾಶವಾಣಿ ಸಮ್ಯಕ್ ದರ್ಶನದ ಗಣಿಯಂತಿದೆ. ಧಾರವಾಡ ನಗರಕ್ಕೆ ಸಾಂಸ್ಕೃತಿಕ ಹಿರಿಮೆ–ಗರಿಮೆ ತಂದುಕೊಟ್ಟ ಸಂಸ್ಥೆಗಳಲ್ಲಿ ಆಕಾಶವಾಣಿ ಕೇಂದ್ರವೂ ಒಂದಾಗಿದೆ ಎಂದರು.

<><><>

**ಬೈಟ್: ಸತೀಶ್ ಕುಲಕರ್ಣಿ 45 ಸೆಕೆಂದುಗಳು**

<><><>

**ಆಕಾಶವಾಣಿಯ ಅಮೃತ**ಮಹೋತ್ಸವ ಸಂಭ್ರಮಾಚರಣೆ ಸಂದರ್ಭ ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಅವರು ಕಳುಹಿಸಿದ ಶುಭಾಶಯ ಪತ್ರವನ್ನು ನಿಲಯದ ಅಭಿಯಂತರ ವಿಭಾಗದ ಉಪ ಮಹಾ ನಿರ್ದೇಶಕ ಅರುಣ ಪ್ರಭಾಕರ ವಾಚಿಸಿದರು. ಕಾರ್ಯಕ್ರಮ ಮುಖ್ಯಸ್ಥ ಶರಣಬಸವ ಚೋಳಿನ ಪ್ರಾಸ್ತಾವಿಕವಾಗಿ ಮಾತನಾಡಿದರು.

<><><>

**ಇದೇ 23 ರಿಂದ 25ರ ವರೆಗೆ ಬೆಂಗಳೂರಿನ ಅರಮನೆ ಮೈದಾನದ**ಲ್ಲಿ ಸಾವಯವ ಮತ್ತು ಸಿರಿಧಾನ್ಯ ಅಂತಾರಾಷ್ಟ್ರೀಯ ವಾಣಿಜ್ಯ ಮೇಳದ 6ನೇ ಆವೃತ್ತಿಯನ್ನು ಆಯೋಜಿಸಲಾಗಿದೆ ಎಂದು ಕೃಷಿ ಖಾತೆ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದ್ದಾರೆ. 'ಅಂತಾರಾಷ್ಟ್ರೀಯ ವಾಣಿಜ್ಯ ಮೇಳ ಸಾವಯವ ಮತ್ತು ಸಿರಿಧಾನ್ಯ – 2025' ಕಾರ್ಯಕ್ರಮದ ಪ್ರಯುಕ್ತ ಆಯೋಜಿಸಲಾಗಿದ್ದ 'ರಾಜ್ಯ ಮಟ್ಟದ ಸಿರಿಧಾನ್ಯ ಮತ್ತು ಮರೆತುಹೋದ ಖಾದ್ಯಗಳ ಪಾಕ ಸ್ಪರ್ಧೆ'ಯ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಸಿರಿಧಾನ್ಯಗಳಿಂದ ತಯಾರಿಸಿದ ಆಹಾರ ಸೇವನೆಯಿಂದ ನಮ್ಮ ಆರೋಗ್ಯ ವೃದ್ಧಿ ಸಾಧ್ಯ, ನಮ್ಮ ಪೂರ್ವಜರು ತಮ್ಮ ನಿತ್ಯ ಆಹಾರದಲ್ಲಿ ಸಿರಿಧಾನ್ಯವನ್ನೇ ಹೆಚ್ಚಾಗಿ ಬಳಸುತ್ತಿದ್ದರು. ಆದರೆ ಇತ್ತೀಚಿನ ದಿನಗಳಲ್ಲಿ ಸಿರಿಧಾನ್ಯ ಶ್ರೀಮಂತರ ಆಹಾರವಾಗಿ ಬದಲಾಗುತ್ತಿದೆ ಎಂದರು.

<><><>

**ತಾಲ್ಲೂಕು ಕಚೇರಿ, ಭೂಮಾಪನ ಇಲಾಖೆ ಹಾಗೂ ಸಬ್ ರಿಜಿಸ್ಟ್ರಾರ್** ಕಚೇರಿಯ ಎಲ್ಲಾ ಹಳೆಯ ದಾಖಲೆಗಳನ್ನು ಕಂಪ್ಯೂಟರ್‌ನಲ್ಲಿ ಸ್ಕ್ಯಾನ್ ಮಾಡಿ ಎಲ್ಲಾ ದಾಖಲೆಗಳು ಆನ್‌ಲೈನ್ ಮೂಲಕ ಎಲ್ಲಾ ಸಾರ್ವಜನಿಕರಿಗೆ ಮುಕ್ತವಾಗಿ ಲಭ್ಯವಾಗುವಂತೆ ಮಾಡಲು ರಾಜ್ಯ ಸರ್ಕಾರ ಭೂಸುರಕ್ಷಾ ಯೋಜನೆಗೆ ಚಾಲನೆ ನೀಡಲಾಗಿದೆ ಎಂದು ಕಂದಾಯ ಸಚಿವ ಕೃ ್ಣ ಬೈರೇಗೌಡ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲೆ ಗುಡಿಬಂಡೆಯಲ್ಲಿ ಜಿಲ್ಲಾಡಳಿತ ಹಾಗೂ ಕಂದಾಯ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಭೂ ಸುರಕ್ಷಾ ಯೋಜನೆಗೆ ಚಾಲನೆ ನೀಡಿ ಅವರು ಮಾತನಾಡಿದರು.

<><><>

**ಕೊಪ್ಪಳ** ಜಿಲ್ಲೆಯಲ್ಲಿ **ಭೂ ದಾಖಲೆಗಳ ಗಣಕೀಕರಣ ಕಾರ್ಯ** ಸರಿಯಾಗಿ ಮಾಡಿ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ತಂಗಡಗಿ ಹೇಳಿದ್ದಾರೆ. ಗೂಗಲ್ ಮೀಟ್ ಮೂಲಕ ಭೂ ಸುರಕ್ಷಾ ಯೋಜನೆ ಅಡಿ ಕೊಪ್ಪಳ ಜಿಲ್ಲೆಯ ಎಲ್ಲಾ ತಾಲೂಕಿನ ಭೂ ದಾಖಲೆಗಳ ಗಣಕೀಕರಣ ಕಾರ್ಯಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

<><><>

**ಯಾದಗಿರಿ ಜಿಲ್ಲೆಯ ಶಹಾಪುರ ನಗರದಲ್ಲಿ ಹಲವು ಕಾರಣದಿಂದ ನೆನೆ**ಗುದಿಗೆ ಬಿದ್ದಿರುವ 407 ನಿವೇಶನ ಹಂಚಿಕೆಯ ಕಾರ್ಯವನ್ನು ಮಾರ್ಚ್ ಅಂತ್ಯದಲ್ಲಿ ಅರ್ಹ ಫಲಾನುಭವಿಗಳಿಗೆ ಮಾಡಲಾಗುವುದು ಎಂದು ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಖಾತೆ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ತಿಳಿಸಿದ್ದಾರೆ.

<><><><><><>

**ಇದೇ 11 ಮತ್ತು 12ರಂದು ಮಂಗಳೂರು ಹೊರವಲಯದ** ನರಿಂಗಾನದಲ್ಲಿ ಕಂಬಳೋತ್ಸವ ಆಯೋಜಿಸಲಾಗಿದ್ದು, ಸಭಾ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪಾಲ್ಗೊಳ್ಳಲಿದ್ದಾರೆ ಎಂದು ವಿಧಾನಸಭಾ ಅಧ್ಯಕ್ಷ ಯು.ಟಿ.ಖಾದರ್ ತಿಳಿಸಿದ್ದಾರೆ.

ಮಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಾನಪದ ಕ್ರೀಡೆಯಾದ ಕಂಬಳ ಕರಾವಳಿಯಾದ್ಯಂತ ನಡೆಯುತ್ತಿದ್ದು, ನರಿಂಗಾನದಲ್ಲೂ ಕಳೆದ ಮೂರು ವರ್ಷಗಳಿಂದ ಅದ್ದೂರಿಯಾಗಿ ನಡೆಯುತ್ತಾ ಬಂದಿದೆ. ಊರಿನ ಉತ್ಸವದ ರೀತಿಯಲ್ಲಿ ನಡೆಯಲಿರುವ ಕಂಬಳೋತ್ಸವದಲ್ಲಿ ಕಂಬಳ ಕ್ಷೇತ್ರದ ಸಾಧಕರನ್ನು ಸನ್ಮಾನಿಸಲಾಗುವುದು ಎಂದರು.

**ಸಂಕ್ಷಿಪ್ತ ಸುದ್ದಿ**

**ಕೊಡಗು ಜಿಲ್ಲೆಯ ಮಡಿಕೇರಿ ಮತ್ತು ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ಅಂತಿಮ** ಮತದಾರರ ಪಟ್ಟಿಯನ್ನು ಪ್ರಕಟಿಸಲಾಗಿದೆ ಎಂದು ಜಿಲ್ಲಾಧಿಕಾರಿ ವೆಂಕಟ್ ರಾಜಾ ತಿಳಿಸಿದ್ದಾರೆ. ಅಂತಿಮ ಮತದಾರರ ಪಟ್ಟಿಯನ್ನು ಪರಿಶೀಲಿಸಿಕೊಂಡು, ಹೆಸರು ಮತದಾರರ ಪಟ್ಟಿಯಲ್ಲಿ ನೋಂದಣಿಯಾಗಿರುವ ಬಗ್ಗೆ ಖಚಿತ ಪಡಿಸಿಕೊಳ್ಳುವಂತೆ ಅವರು ಕೋರಿದ್ದಾರೆ.

**ಪ್ರಕೃತಿಗೆ ಹೆಚ್ಚಿನ ಮಹತ್ವವನ್ನು ನೀಡಿ, ಅದಕ್ಕೆ ಪೂರಕವಾಗಿ ಬದುಕುವ** ಮೂಲಕ ಮಾಲಿನ್ಯವನ್ನು ತಡೆಗಟ್ಟುವಲ್ಲಿ ಹೆಚ್ಚಿನ ಪಾತ್ರವನ್ನು ವಹಿಸಬೇಕೆಂದು **ಬಾಗಲಕೋಟೆ** ಜಿಲ್ಲಾಧಿಕಾರಿ ಜಾನಕಿ ಕೆ.ಎಂ ತಿಳಿಸಿದ್ದಾರೆ.

**ಭಾರತ್ ಫೌಂಡೇಶನ್ ವತಿಯಿಂದ ಮಂಗಳೂರು ಲಿಟ್ ಫೆಸ್ಟ್ ಇದೇ** 11 ಮತ್ತು 12ರಂದು ನಡೆಯಲಿದೆ ಎಂದು ಭಾರತ್ ಫೌಂಡೇಶನ್ ಟ್ರಸ್ಟಿ ಸುನೀಲ್ ಕುಲಕರ್ಣಿ ತಿಳಿಸಿದ್ದಾರೆ.

**ಬಳ್ಳಾರಿ ಜಿಲ್ಲೆಯಲ್ಲಿ ಬಾಲ್ಯ ವಿವಾಹ ಪ್ರಕರಣಗಳು ಹೆಚ್ಚಾಗಿ ಕಂಡುಬರುವ ಸಮುದಾಯಗಳಲ್ಲಿ** ಅದರಿಂದಾಗುವ ದುಷ್ಪರಿಣಾಮ ಕುರಿತು ಹೆಚ್ಚಿನ ಅರಿವು ಮೂಡಿಸಬೇಕು ಎಂದು ಬಳ್ಳಾರಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಹೇಳಿದ್ದಾರೆ.

**ಫೆಬ್ರವರಿ 28 ರಿಂದ ಮೂರು ದಿನಗಳ ಕಾಲ ನಡೆಯುವ ಹಂಪಿ** ಉತ್ಸವವನ್ನು ವಿಶೇ ʼವಾಗಿ ಆಚರಿಸಲು ಅಧಿಕಾರಿಗಳು ಉತ್ಸುಕರಾಗಿ ಕಾರ್ಯನಿರ್ವಹಿಸಬೇಕು. ಸಿದ್ದತೆಗೆ ಉಪಸಮಿತಿಗಳನ್ನು ರಚಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ಹೇಳಿದರು.